# All India Radio: Bangalore
# National Bulletin In Kannada
# 28.01.2026  7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.01.2026  7.35 am**

**<>><><*><><<>**

ಮುಖ್ಯಾಂಶಗಳು

**೧. ಸಂಸತ್ತಿನ ಬಜೆಟ್ ಅಧಿವೇಶನ ಇಂದಿನಿಂದ ಆರಂಭ; ಉಭಯ ಸದನಗಳನ್ನುದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ**

**೨. ದೆಹಲಿಯಲ್ಲಿ ಇಂದು 'ಎನ್‌ಸಿಸಿ ಪಿಎಂ ರ‍್ಯಾಲಿ'- ಪ್ರಧಾನಿ ನರೇಂದ್ರ ಮೋದಿ ಭಾಗಿ**

**೩. ಐತಿಹಾಸಿಕ ಮುಕ್ತ ವ್ಯಾಪಾರ ಒಪ್ಪಂದ ಅಂತಿಮಗೊಳಿಸಿದ ಭಾರತ-ಐರೋಪ್ಯ ಒಕ್ಕೂಟ**

**೪. ಏಷ್ಯಾದ ಅತಿದೊಡ್ಡ ನಾಗರಿಕ ವೈಮಾನಿಕ ಮೇಳ-ವಿಂಗ್ಸ್ ಇಂಡಿಯಾ- ೨೦೨೬, ಇಂದಿನಿಂದ ಹೈದರಾಬಾದ್‌ನಲ್ಲಿ ಆರಂಭ**

**೫. ಹತ್ತೊಂಬತ್ತು ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್; ಭಾರತಕ್ಕೆ ೨೦೪ ರನ್‌ಗಳ ಭರ್ಜರಿ ಜಯ**

**<>><><*><><<>**

ಸಂಸತ್ತಿನ ಬಜೆಟ್ ಅಧಿವೇಶನಕ್ಕೂ ಮುನ್ನ ಕೇಂದ್ರ ಸರ್ಕಾರ ನವದೆಹಲಿಯಲ್ಲಿ ನಿನ್ನೆ ಸರ್ವಪಕ್ಷಗಳ ಸಭೆಯನ್ನು ಆಯೋಜಿಸಿತ್ತು. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಭೆಯ ಅಧ್ಯಕ್ಷತೆ ವಹಿಸಿದ್ದರು. ರಾಜ್ಯಸಭೆಯ ಸಭಾ ನಾಯಕ ಜೆ.ಪಿ. ನಡ್ಡಾ, ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಸಂಸದೀಯ ವ್ಯವಹಾರಗಳ ಖಾತೆ ರಾಜ್ಯ ಸಚಿವರಾದ ಅರ್ಜುನ್ ರಾಮ್ ಮೇಘವಾಲ್ ಮತ್ತು ಡಾ.ಎಲ್. ಮುರುಗನ್ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು. ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್, ಡಿಎಂಕೆ ನಾಯಕಿ ತಿರುಚಿ ಶಿವ, ಟಿಎಂಸಿ ನಾಯಕಿ ಸಾಗರಿಕಾ ಘೋಷ್, ಸಮಾಜವಾದಿ ಪಕ್ಷದ ಸಂಸದೆ ರಾಮಗೋಪಾಲ್ ಯಾದವ್ ಮತ್ತಿತರರು ಸಭೆಯಲ್ಲಿ ಭಾಗವಹಿಸಿದ್ದರು. ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಬಜೆಟ್ ಅಧಿವೇಶನದ ಮೊದಲ ಭಾಗವು ರಾಷ್ಟ್ರಪತಿಗಳ ಭಾಷಣಕ್ಕೆ ವಂದನಾ ನಿರ್ಣಯವನ್ನು ಒಳಗೊಂಡಿರುತ್ತದೆ ಮತ್ತು ನಂತರ ಸಂಸತ್ತಿನ ಎರಡೂ ಸದನಗಳಲ್ಲಿ ಬಜೆಟ್ ಕುರಿತು ಚರ್ಚೆಗಳು ನಡೆಯಲಿವೆ ಎಂದು ಹೇಳಿದರು. ಅಧಿವೇಶನ ಸುಗಮವಾಗಿ ನಡೆಯಲು ಸಹಕರಿಸುವಂತೆ ರಿಜಿಜು ಎಲ್ಲಾ ರಾಜಕೀಯ ಪಕ್ಷಗಳಿಗೆ ಮನವಿ ಮಾಡಿದರು.

**ಧ್ವನಿ:-ಕಿರಣ್ ರಿಜಿಜು ( ೧೬ ಸೆಕೆಂಡ್ಸ್)**

**<>><><*><><<>**

ಪ್ರಧಾನ ಮಂತ್ರಿ ನರೇಂದ್ರ ಮೋದಿ ನವದೆಹಲಿಯಲ್ಲಿಂದು ಕಾರ್ಯಪ್ಪ ಪರೇಡ್ ಮೈದಾನದಲ್ಲಿ ನಡೆಯುವ ವಾರ್ಷಿಕ ಎನ್‌ಸಿಸಿ ಪಿಎಂ ರ‍್ಯಾಲಿಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಈ ವರ್ಷದ ರ‍್ಯಾಲಿಯ ವಿಷಯ ರಾಷ್ಟ್ರ ಪ್ರಥಮ - ಕರ್ತವ್ಯ ನಿಷ್ಠ ಯುವಜನತೆ' ಎಂಬುದಾಗಿದೆ. ಈ ರ‍್ಯಾಲಿಯು ಭಾರತದ ಯುವಜನತೆಯಲ್ಲಿ ಕರ್ತವ್ಯ, ಶಿಸ್ತು ಮತ್ತು ರಾಷ್ಟ್ರೀಯ ಬದ್ಧತೆಯ ಮನೋಭಾವವನ್ನು ಪ್ರತಿಬಿಂಬಿಸುತ್ತದೆ ಎಂದು ಪ್ರಧಾನಮಂತ್ರಿಗಳ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ. ಎನ್‌ಸಿಸಿ ಪಿಎಂ ರ‍್ಯಾಲಿಯು ಒಂದು ತಿಂಗಳ ಕಾಲ ನಡೆದ ಎನ್‌ಸಿಸಿ ಗಣರಾಜ್ಯೋತ್ಸವ ಶಿಬಿರ ೨೦೨೬ರ ಭವ್ಯ ಸಮಾರೋಪದ ಭಾಗವಾಗಿದೆ. ಇದರಲ್ಲಿ ೮೯೮ ಬಾಲಕಿಯರ ಕೆಡೆಟ್‌ಗಳು ಸೇರಿ ದೇಶಾದ್ಯಂತ ಎರಡು ಸಾವಿರ ೪೦೬ ಎನ್‌ಸಿಸಿ ಕೆಡೆಟ್‌ಗಳು ಭಾಗವಹಿಸಿದ್ದರು. ರ‍್ಯಾಲಿಯಲ್ಲಿ ೨೧ ವಿದೇಶಗಳಿಂದ ೨೦೭

ಯುವಕರು ಮತ್ತು ಅಧಿಕಾರಿಗಳು ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ, ಎನ್‌ಸಿಸಿ ಕೆಡೆಟ್‌ಗಳು, ರಾಷ್ಟ್ರೀಯ ರಂಗಶಾಲೆ ಮತ್ತು ರಾಷ್ಟ್ರೀಯ ಸೇವಾ ಯೋಜನೆಯ ಸದಸ್ಯರು ರಾಷ್ಟ್ರ ನಿರ್ಮಾಣ, ಸಾಮಾಜಿಕ ಸೇವೆ ಮತ್ತು ವ್ಯಕ್ತಿತ್ವ ಅಭಿವೃದ್ಧಿಯಲ್ಲಿ ತಮ್ಮ ಪಾತ್ರವನ್ನು ಪ್ರದರ್ಶಿಸುವ ಹಲವು ವಿಭಿನ್ನ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಲಿದ್ದಾರೆ.

**<>><><*><><<>**

ಭಾರತ ಮತ್ತು ಐರೋಪ್ಯ ಒಕ್ಕೂಟ ನಿನ್ನೆ ಐತಿಹಾಸಿಕ ಮುಕ್ತ ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸಿವೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಐರೋಪ್ಯ ಮಂಡಳಿಯ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಮತ್ತು ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾವಾನ್ ಡೇರ್ ಲೆಯೇನ್ ಅವರೊಂದಿಗೆ ದೆಹಲಿಯಲ್ಲಿ ನಡೆದ ಭಾರತ-ಐರೋಪ್ಯ ಒಕ್ಕೂಟ ಶೃಂಗಸಭೆಯಲ್ಲಿ ಈ ನಿರ್ಧಾರವನ್ನು ಕೈಗೊಳ್ಳಲಾಗಿದೆ. ಮಾತುಕತೆಯ ವೇಳೆ ಉಭಯ ದೇಶಗಳ ನಾಯಕರು, ವ್ಯಾಪಾರ, ಭದ್ರತೆ, ರಕ್ಷಣಾ ಪಾಲುದಾರಿಕೆ, ಸರಕು-ಸಾಗಣೆ, ವಿಪತ್ತು ನಿರ್ವಹಣೆ, ಹಸಿರು ಹೈಡ್ರೋಜನ್ ಸೇರಿದಂತೆ ಏಳು ಒಪ್ಪಂದಗಳನ್ನು ವಿನಿಮಯಮಾಡಿಕೊಂಡಿವೆ. ನಂತರ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಭಾರತ ಇಂದು ಐರೋಪ್ಯ ಒಕ್ಕೂಟದೊಂದಿಗೆ ಬಹುದೊಡ್ಡ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಿದೆ. ಇದು ರೈತರು ಮತ್ತು ಎಂಎಸ್‌ಎಮ್‌ಇಗಳಿಗೆ ಅನುಕೂಲವಾಗಲಿದೆ. ಇದರಿಂದ ಜಾಗತಿಕಮಟ್ಟದಲ್ಲಿ ಪೂರೈಕೆ ಸರಣಿ ಬಲವರ್ಧನೆಗೊಳ್ಳುವುದಲ್ಲದೆ, ಹೂಡಿಕೆಗೆ ಉತ್ತೇಜನ ಸಿಗಲಿದೆ ಮತ್ತು ಹೊಸ ನಾವಿನ್ಯ ಪಾಲುದಾರಿಕೆಗಳಿಗೆ ಅನುಕೂಲವಾಗಲಿದೆ ಎಂದು ಹೇಳಿದರು.

**<>><><*><><<>**

ಭಾರತ-ಯುರೋಪಿಯನ್ ಒಕ್ಕೂಟದ ಮುಕ್ತ ವ್ಯಾಪಾರ ಒಪ್ಪಂದದ ಐತಿಹಾಸಿಕ ಮಾತುಕತೆಗಳು ಯಶಸ್ವಿಯಾಗಿ ಪೂರ್ಣಗೊಂಡಿರುವುದಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಸಂತೋಷ ವ್ಯಕ್ತಪಡಿಸಿದ್ದಾರೆ. ಅಲ್ಲದೆ, ಒಪ್ಪಂದ ಎರಡೂ ರಾಷ್ಟ್ರಗಳ ಜನರ ಜೀವನದಲ್ಲಿ ಗಮನಾರ್ಹ ಸಕಾರಾತ್ಮಕ ಬದಲಾವಣೆಗಳನ್ನು ತರುತ್ತದೆ. ಈ ಒಪ್ಪಂದವು ಸ್ಥಿರ, ಸಮತೋಲಿತ ಮತ್ತು ನಿಯಮ ಆಧಾರಿತ ಅಂತಾರಾಷ್ಟ್ರೀಯ ಕ್ರಮವನ್ನು ರೂಪಿಸುವ ಉಭಯ ದೇಶಗಳ ಸಾಮೂಹಿಕ ಆಕಾಂಕ್ಷೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ. ಭಾರತ ಮತ್ತು ಯುರೋಪ್ ಸಮಕಾಲೀನ ಹಿತಾಸಕ್ತಿಗಳಿಂದ ಮಾತ್ರವಲ್ಲದೆ ಪ್ರಜಾಪ್ರಭುತ್ವ, ಬಹುತ್ವ ಮತ್ತು ಮುಕ್ತ ಮಾರುಕಟ್ಟೆ ಆರ್ಥಿಕತೆಯಂತಹ ಹಂಚಿಕೆಯ ಮೌಲ್ಯಗಳ ಸಂಬಂಧ ಹೊಂದಿದೆ ಎಂದು ಅವರು ಹೇಳಿದರು.  ನಿನ್ನೆ ಸಂಜೆ ರಾಷ್ಟ್ರಪತಿ ಭವನದಲ್ಲಿ ಐರೋಪ್ಯ ಮಂಡಳಿ ಅಧ್ಯಕ್ಷ ಆಂಟೋನಿಯೊ ಕೋಸ್ಟಾ ಮತ್ತು ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರ ಗೌರವಾರ್ಥವಾಗಿ ಆಯೋಜಿಸಲಾದ ಔತಣಕೂಟದಲ್ಲಿ ಅವರು ಮಾತನಾಡುತ್ತಿದ್ದರು. ಆರ್ಥಿಕ ಸಹಕಾರವು ಭಾರತ-ಯುರೋಪಿಯನ್ ಒಕ್ಕೂಟದ ಸಂಬಂಧಗಳ ಪ್ರಮುಖ ಆಧಾರಸ್ತಂಭವಾಗಿದೆ. ಭಾರತ ಮತ್ತು ಯುರೋಪಿಯನ್ ಒಕ್ಕೂಟವು ವ್ಯಾಪಾರ ಮತ್ತು ಹೂಡಿಕೆಯನ್ನು ಹಂಚಿಕೆಯ ಸಮೃದ್ಧಿ ಮತ್ತು ಸಾಮಾಜಿಕ ಪ್ರಗತಿಯ ಸಾಧನಗಳಾಗಿ ನೋಡುತ್ತವೆ ಎಂದು ಅವರು ಹೇಳಿದರು.

**<>><><*><><<>**

ಏಷ್ಯಾದ ಅತಿದೊಡ್ಡ ನಾಗರಿಕ ವೈಮಾನಿಕ ಮೇಳ-ವಿಂಗ್ಸ್ ಇಂಡಿಯಾ- ೨೦೨೬ ಇಂದಿನಿಂದ ಹೈದರಾಬಾದ್‌ನಲ್ಲಿ ಬೇಗಂಪೇಟ್ ವಿಮಾನ ನಿಲ್ದಾಣದಲ್ಲಿ ಆರಂಭವಾಗಿದೆ. ನಾಲ್ಕು ದಿನಗಳ ಈ ವೈಮಾನಿಕ ಮೇಳದಲ್ಲಿ, ಭಾರತದ ವೈಮಾನಿಕ ಪ್ರಗತಿ ಮತ್ತು ಜಾಗತಿಕ ಭವಿಷ್ಯವನ್ನು ಬಿಂಬಿಸಲಾಗುವುದು. ಮೇಳದಲ್ಲಿ ವಿಶ್ವದರ್ಜೆಯ ಅಂತಾರಾಷ್ಟ್ರೀಯ ವಸ್ತು ಪ್ರದರ್ಶನಗಳು, ಏರೋ ಬೋಟಿಕ್ ವಿಮಾನಗಳ ಪ್ರದರ್ಶನ, ಉನ್ನತಮಟ್ಟದ ಜಾಗತಿಕ ವೈಮಾನಿಕ ಸಮಾವೇಶ, ವೈಮಾನಿಕ ಉದ್ಯೋಗಮೇಳ, ಸಿಇಒ ಗಳ ದುಂಡುಮೇಜಿನ ಸಭೆ ಸೇರಿದಂತೆ ಹಲವು ಕಾರ್ಯಕ್ರಮಗಳು ನಡೆಯಲಿವೆ. ಇದು ರಷ್ಯಾ, ಸಿಂಗಾಪುರ್, ಯುಕೆ, ಫ್ರಾನ್ಸ್, ಜರ್ಮನಿ, ಅಮೆರಿಕ ಸೇರಿದಂತೆ ೨೦ ಅಧಿಕ ದೇಶಗಳ ವಿದೇಶಿ ನಿಯೋಗಗಳು ಈ ವಿಂಗ್ಸ್ ಇಂಡಿಯಾ-೨೦೨೬ ನಲ್ಲಿ ಭಾಗವಹಿಸಲಿವೆ.

<>><><*><><<>

ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ನವದೆಹಲಿಯಲ್ಲಿ ನಿನ್ನೆ ರಾಷ್ಟ್ರೀಯ ನಾಟಕ ಶಾಲೆಯಲ್ಲಿ ೨೦೨೬ರ ೨೫ನೇ ಭಾರತ್ ರಂಗ ಮಹೋತ್ಸವಕ್ಕೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಈ ಉತ್ಸವವು ಭಾರತದ ವೈವಿಧ್ಯಮಯ ಸಂಪ್ರದಾಯಗಳು, ಕಥೆಗಳು ಮತ್ತು ಕಲಾತ್ಮಕ ಅಭಿವ್ಯಕ್ತಿಗಳನ್ನು ಜನರೊಂದಿಗೆ ಸಂಪರ್ಕಿಸುವ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ. ಜನರು ಜಾಗತಿಕವಾಗಿ ದೇಶದ ಸಾಂಸ್ಕೃತಿಕ ಪರಂಪರೆಯನ್ನು ಅರ್ಥಮಾಡಿಕೊಳ್ಳುತ್ತಿರುವಾಗ ಈ ಉತ್ಸವವು ವಿಶ್ವದಾದ್ಯಂತದ ರಾಷ್ಟ್ರದ ಕಲೆ ಮತ್ತು ಸಂಸ್ಕೃತಿಯ ಗ್ರಹಿಕೆಯನ್ನು ಬದಲಾಯಿಸಲು ಸಹಾಯ ಮಾಡುತ್ತದೆ ಎಂದು ಹೇಳಿದರು.

**ಧ್ವನಿ:- ಗಜೇಂದ್ರ ಸಿಂಗ್ ಶೇಖಾವತ್ ( ೨೪ ಸೆಕೆಂಡ್ಸ್)**

ಆಕಾಶವಾಣಿ ನ್ಯೂಸ್‌ನೊಂದಿಗೆ ಪ್ರತ್ಯೇಕವಾಗಿ ಮಾತನಾಡಿದ ರಾಷ್ಟ್ರೀಯ ನಾಟಕ ಶಾಲೆಯ ನಿರ್ದೇಶಕ ಚಿತ್ತರಂಜನ್ ತ್ರಿಪಾಠಿ, ಉತ್ಸವದಲ್ಲಿ ಭಾಗವಹಿಸುವ ಹೊಸ ಕಲಾವಿದರ ಉತ್ಸಾಹವನ್ನು ಶ್ಲಾಘಿಸಿದರು.

<>><><*><><<>

ಬುಲವಾಯೊದ ಕ್ವೀನ್ಸ್ ಸ್ಪೋರ್ಟ್ಸ್ ಕ್ಲಬ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪುರುಷರ ಹತ್ತೊಂಬತ್ತು ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್‌ನಲ್ಲಿ ಭಾರತ ತಂಡವು, ಆತಿಥೇಯ ಜಿಂಬಾಬ್ವೆ ವಿರುದ್ಧ ೨೦೪ ರನ್‌ಗಳಿಂದ ಭರ್ಜರಿ ಜಯ ಸಾಧಿಸುವ ಮೂಲಕ ಎರಡನೇ ಗುಂಪಿನಲ್ಲಿ ಅಗ್ರಸ್ಥಾನಕ್ಕೇರಿದೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡವು, ನಿಗದಿತ ೫೦ ಓವರ್‌ಗಳಲ್ಲಿ ೩೫೨ ರನ್‌ಗಳ ಬೃಹತ್ ಮೊತ್ತವನ್ನು ಗಳಿಸಿತು. ವಿಹಾನ್ ಮಲ್ಹೋತ್ರಾ ಅವರು ಅಜೇಯ ೧೦೯ ರನ್ ಗಳಿಸಿದರು, ವಿಹಾನ್ ಅವರ ಶತಕವು ಪಂದ್ಯಾವಳಿಯಲ್ಲಿ ಭಾರತದ ಮೊದಲ ಶತಕವಾಗಿತ್ತು. ೩೫೨ ರನ್ ಗುರಿ ಬೆನ್ನತ್ತಿದ ಜಿಂಬಾಬ್ವೆ ತಂಡವು ೩೭.೪ ಓವರ್‌ಗಳಲ್ಲಿ ಕೇವಲ ೧೪೮ ರನ್‌ಗಳಿಗೆ ಆಲೌಟ್ ಆಯಿತು. ಭಾರತ ಪರ ವೇಗಿ ಆರ್‌ಎಸ್ ಅಂಬ್ರೀಶ್ ಆರಂಭಿಕ ಎರಡು ವಿಕೆಟ್‌ಗಳನ್ನು ಕಬಳಿಸಿದರೆ, ನಾಯಕ ಆಯುಷ್ ಮ್ಹಾತ್ರೆ ಮತ್ತು ಉಧವ್ ಮೋಹನ್ ತಲಾ ಮೂರು ವಿಕೆಟ್‌ಗಳನ್ನು ಪಡೆದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಗಿಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**